ಮಂಗಳವಾರ 23–09–2025 ಬೆಂಗಳೂರು ಬೆಲೆ: 5ರೂ, 4ಪಟಗಳು ಸಂಪುಟ 01–ಸಂಚಿಕೆ 59
Digital Varthe Kannada Daily Volume 01 - Issue 59 Tuesday 23-09-2025 Price: 5/- Rs 2 Pages Bengalore

DIGITAL VARTHE
www.digitalvarthe.com
digitalvarthe@gmail.com

# ಡಿಜಿಟಲ್ ವಾರ್ತೆ
ಕನ್ನಡಿಗರ ಶಕ್ತಿ

ಅಭಿಷೇಕ್ ಚಿಕ್ಕಮಾರನಹಳ್ಳಿ
ಸಂಪಾದಕರು
ಪುರುಷೋತ್ತಮ್ ಬಿ.ಹೆಚ್
ವ್ಯವಸ್ಥಾಪಕರು
RNI:KNKAN/25/A1348
ಕನ್ನಡ ದಿನಪತ್ರಿಕೆ

## ಸೈಬರ್ ವಂಚನೆ :ಕ್ಷಿಪ್ರ ಕಾರ್ಯಾಚರಣೆ ನಡೆಸಿ 14 ಲಕ್ಷ ರೂ. ವಾಪಸ್

ಬೆಂಗಳೂರು: ಡಿಜಿಟಲ್ ಅರೆಸ್ಟ್ ಹೆಸರಲ್ಲಿ ಸೈಬರ್ ವಂಚನೆಗೊಳಗಾಗಿ ಹಣ ಕಳೆದುಕೊಂಡಿದ್ದ ಮಹಿಳೆಗೆ 14 ಲಕ್ಷ ರೂ. ಹಣವನ್ನು ಕೇವಲ ಒಂದು ವಾರದೊಳಗೆ ವಾಪಸ್ ಕೊಡಿಸುವಲ್ಲಿ ಪಶ್ಚಿಮ ವಿಭಾಗದ ಸಿಇಎನ್ ಠಾಣೆ ಪೊಲೀಸರು ಯಶಸ್ವಿಯಾಗಿದ್ದಾರೆ.




ಬಸವೇಶ್ವರ ನಗರದ ಪ್ರೀತಿ (44) ಎಂಬುವವರಿಗೆ ಸೈಬರ್ ವಂಚಕರು ವಾಟ್?ಸಆಪ್ ಕರೆಮಾಡಿ ತಾವು ಮುಂಬೈ ಸೈಬರ್ ಕ್ರೈಂ ಎಂದು ಪರಿಚಯಿಸಿಕೊಂಡು ನಿಮ ಬ್ಯಾಂಕ್ ಖಾತೆಯಲ್ಲಿ ಅಕ್ರಮವಾಗಿ ಹಣ ವರ್ಗಾವಣೆಯಾಗಿದೆ ಎಂದು ಹೆದರಿಸಿದ್ದಾರೆ.

ನಿಮ ಹಣವನ್ನು ಆರ್‌ಬಿಐಗೆ ವೆ–ರಿಫಿಕೇಷನ್‌ಗೆ ಕಳುಹಿಸಿ ಪುನಃ 45 ನಿಮಿಷದಲ್ಲಿ ನಿಮ ಖಾತೆಗೆ ಹಣ ವರ್ಗಾವಣೆ ಮಾಡುತ್ತೇವೆ, ಒಂದು ವೇಳೆ ನಾವು ಹೇಳಿದ ಖಾತೆಗೆ ಹಣ ವರ್ಗಾವಣೆ ಮಾಡದಿದ್ದಲ್ಲಿ ನಿಮನ್ನು ಬಂಧಿಸಲಾಗುವುದೆಂದು ಬೆದರಿಸಿದ್ದಾರೆ. ತದ ನಂತರ ಎಚ್‌ಡಿಎಫ್‌ಸಿ ಬ್ಯಾಂಕ್ ಖಾತೆಯಿಂದ 14 ಲಕ್ಷ ರೂ. ಹಣವನ್ನು ಯೆಸ್ ಬ್ಯಾಂಕ್ ಖಾತೆಗೆ ಕರೆ ಮಾಡಿದ ವ್ಯಕ್ತಿ ವರ್ಗಾವಣೆ ಮಾಡಿಸಿಕೊಂಡಿದ್ದಾನೆ. ಕೆಲ ಗಂಟೆಗಳಾದರೂ ತಮ ಖಾತೆಗೆ ವಾಪಸ್ ಹಣ ವರ್ಗಾವಣೆಯಾಗದಿದ್ದಾಗ ಮೋಸ ಹೋಗಿರುವುದನ್ನು ಅರಿತ ಪ್ರೀತಿಯವರು ತಕ್ಷಣ ಪೊಲೀಸರಿಗೆ ದೂರು ನೀಡಿದ್ದಾರೆ.

ಈ ಬಗ್ಗೆ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡ ಸಿಇಎನ್ ಠಾಣೆ ಪೊಲೀಸರು, ಕೂಡಲೇ ಪ್ರೀತಿಯವರಿಂದಲೇ ರಾಷ್ಟ್ರೀಯ ಸೈಬರ್ ಸಹಾಯವಾಣಿ ನಂಬರ್1930ಗೆ ಕರೆ ಮಾಡಿಸಿ ದೂರು ದಾಖಲಿಸಿ, ಹಣ ವರ್ಗಾವಣೆಯಾದ ಆರೋಪಿತನ ಬ್ಯಾಂಕ್ ಖಾತೆಯಲ್ಲಿ ಹಣ ಫ್ರೀಜ್ ಮಾಡಿಸಲಾಗಿದೆ. ತನಿಖೆ ಮುಂದುವರೆಸಿದ ಪೊಲೀಸರು ಆರೋಪಿಯ ಬ್ಯಾಂಕ್ ಖಾತೆಯಲ್ಲಿ ಫ್ರೀಜ್ ಆಗಿದ್ದ ಹಣವನ್ನು ವಾಪಸ್ ದೂರುದಾರರಾದ ಪ್ರೀತಿಯವರ ಬ್ಯಾಂಕ್ ಖಾತೆಗೆ ವರ್ಗಾವಣೆ ಮಾಡಿಸುವ ಸಂಬಂಧ ಯೆಸ್ ಬ್ಯಾಂಕ್‌ನ ಅಧಿಕಾರಿಗಳಿಗೆ ನಿರ್ದೇಶನ ನೀಡುವಂತೆ 47 ನೇ ಎಸಿಜೆಎಂ ನ್ಯಾಯಾಲಯದಿಂದ ಆದ–ೇಶವನ್ನು ಪಡೆದಿದ್ದಾರೆ.

ಅದರಂತೆ ಕೇವಲ ಒಂದು ವಾರದೊಳಗೆ ತ್ವರಿತಗತಿಯಲ್ಲಿ ಸಂಪೂರ್ಣ 14 ಲಕ್ಷ ರೂ. ಹಣವನ್ನು ದೂರುದಾರರಾದ ಪ್ರೀತಿ ಅವರಿಗೆ ವಾಪಸ್ ಕೊಡಿಸುವಲ್ಲಿ ಪಶ್ಚಿಮ ವಿಭಾಗದ ಸಿಇಎನ್ ಠಾಣೆ ಪೊಲೀಸರು ಯಶಸ್ವಿಯಾಗಿದ್ದಾರೆ. ಈ ಕಾರ್ಯಾಚರಣೆಯಲ್ಲಿ ಉಪ ಪೊಲೀಸ್ ಆಯುಕ್ತ ಗಿರೀಶ್ ಅವರ ಮಾರ್ಗದರ್ಶನದಲ್ಲಿ , ಸಹಾಯಕ ಪೊಲೀಸ್ ಆಯುಕ್ತರಾದ ಉಮಾಮಣಿ ಅವರ ನೇತೃತ್ವದ ತನಿಖಾ ತಂಡವು ಯಶಸ್ವಿಯಾಗಿದೆ. ಸಾರ್ವಜನಿಕರಿಗೆ ಸೂಚನೆ: ಸೈಬರ್ ವಂಚನೆಗೆ ಒಳಗಾಗಿ ಹಣವನ್ನು ಕಳೆದುಕೊಂಡವರು ಗಾಬ–ರಿಗೊಳ್ಳದೆ ಸಮಯವನ್ನು ವ್ಯರ್ಥ ಮಾಡದೇ ಕೂಡಲೇ ರಾಷ್ಟ್ರೀಯ ಸೈಬರ್ ಸಹಾಯವಾಣಿ (1930) ಗೆ ದೂರು ದಾಖಲಿಸುವಂತೆ ಪೊಲೀಸರು ಸೂಚಿಸಿದ್ದಾರೆ. ಕೂಡಲೇ ಸಮೀಪದ ಪೊಲೀಸ್ ಠಾಣೆಯಲ್ಲಿ ಪ್ರಕರಣವನ್ನು ದಾಖಲಿಸಿದ್ದಲ್ಲಿ ತ್ವರಿತವಾಗಿ ಕ್ರಮಕೈಗೊಂಡು ತಮಗಾಗುವ ನಷ್ಟವನ್ನು ತಪ್ಪಿಸಬಹುದಾಗಿದೆ ಎಂದು ಸೈಬರ್ ಕ್ರೈಂ ಪೊಲೀಸರು ಸಲಹೆ ಮಾಡಿದ್ದಾರೆ.

## ಚಾಮುಂಡೇಶ್ವರಿ ಮೂರ್ತಿಗೆ ಪುಷ್ಪಾರ್ಚನೆ ಮಾಡಿ ದಸರಾಗೆ ಚಾಲನೆ ಕೊಟ್ಟ ಬಾನು ಮುಷ್ತಾಕ್

ಮೈಸೂರು: ವಿಶ್ವಖ್ಯಾತ ಮೈಸೂರು ದಸರಾಗೆ ಬೂಕರ್ ಪ್ರಶಸ್ತಿ ಪುರಸ್ಕೃತೆ, ಸಾಹಿತಿ ಬಾನು ಮುಷ್ತಾಕ್ ಅವರು ಅಧಿದೇವತೆ ಚಾಮುಂಡೇಶ್ವರಿ ಉತ್ಸವ ಮೂರ್ತಿಗೆ ಪುಷ್ಪಾರ್ಚನೆ ಮಾಡುವ ಮೂಲಕ ಸಂಪ್ರದಾಯಬದ್ಧವಾಗಿ ದಸರಾಗೆ ವಿದ್ಯುಕ್ತ ಚಾಲನೆ ನೀಡಿದರು. ಇಂದು ಬೆಳಿಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಜಿಲ್ಲಾ ಉಸ್ತುವಾರಿ ಸಚಿವ ಎಚ್.ಸಿ.ಮಹದೇವಪ್ಪ ಸೇರಿದಂತೆ ಮತ್ತಿತರ ಗಣ್ಯರೊಂದಿಗೆ ಚಾಮುಂಡಿ ಬೆಟ್ಟಕ್ಕೆ ಭೇಟಿ ನೀಡಿ ದೇವಾಲಯದ ಆವರಣದಲ್ಲಿರುವ ವಿಘ್ನ ನಿವಾರಕ ಗಣೇಶನಿಗೆ ನಮಿಸಿ ನಂತರ ಅಧಿದೇವತೆ ಚಾಮುಂಡೇಶ್ವರಿ ದೇವಿಗೆ ಪೂಜೆ ಸಲ್ಲಿಸಿದರು. ಇದಕ್ಕೂ ಮುನ್ನ ತಾಯಿ ಚಾಮುಂಡೇಶ್ವರಿಗೆ ಇಂದು ಬೆಳಿಗ್ಗಿನಿಂದಲೇ ದೇವೀ ಕೆರೆಯಿಂದ ಜಲವನ್ನು ತಂದು ಅಭಿಷೇಕವನ್ನು ಮಾಡಿ ಪಂಚಾಮೃತ ಅಭಿಷೇಕ, ರುದ್ರಾಭಿಷೇಕ ನೆರವೇರಿಸಿದರು.



ದೇವಾಲಯವನ್ನು ವಿವಿಧಹೂ ಹಾಗೂ ಕಬ್ಬಿನ ಜಲ್ಲೆಯಿಂದ ವಿಶೇಷ ಅಲಂಕಾರ ಮಾಡಲಾಗಿತ್ತು. ದೇವಿಗೆ ಇಂದು ಬ್ರಾಹ್ಮಿ ಅಲಂಕಾರ ಮಾಡಲಾಗಿದ್ದು, ಪ್ರಧನ ಅರ್ಚಕರಾದ ಶಶಿಶೇಖರ ದೀಕ್ಷಿತ್‌ರವರು ಸಂಕಲ್ಪವನ್ನು ಮಾಡಿ ಮಹಾಮಂಗಳಾರತಿ ನೆರವೇರಿಸಿದರು. ಮಂಗಳಾರತಿ ಸ್ವೀಕರಿಸಿದ ವೇಳೆ ಬಾನು ಮುಷ್ತಾಕ್‌ರವರುಭಾವುಕರಾದರು. ನಂತರ ಉದ್ಘಾಟನಾ ಕಾರ್ಯಕ್ರಮಕ್ಕೆ ಮುಷ್ತಾಕ್‌ರವರು ಅರ್ಚಕ–ರಿಂದ ಹೂವಿನ ಹಾರವನ್ನು ಸ್ವೀಕರಿಸಿದರು. ದೇವಿ ಪೂಜೆ ಹಾಗೂ ದಸರಾ ಉದ್ಘಾಟನೆಗೆ ಅರಿಶಿನ ಬಣ್ಣದ ಸೀರೆ ಹಾಗೂ ಹಸಿರು ಬಣ್ಣದ ರವಿಕೆ ತೊಟ್ಟು, ಹೂ ಮುಡಿದಿದ್ದು ವಿಶೇಷವಾಗಿತ್ತು. ನಂತರ ದೇವಾಲಯದ ಆವರಣದಲ್ಲಿ ನಿರ್ಮಾಣ ಮಾಡಲಾಗಿದ್ದ ಬೃಹತ್ ವೇದಿಕೆಯತ್ತ ಆಗಮಿಸಿದ ಬಾನು ಮುಷ್ತಾಕ್‌ರವರಿಗೆ ಮೈಸೂರು ಪೇಟ ಹಾಗೂ ಶಾಲು ಹೊದಿಸಿ ಹಾಗೂ ಮರದ ಅಂಬಾ–ರಿಯ ಸ್ಮರಣಿಕೆಯನ್ನು ನೀಡಿ ಸನ್ಮಾನಿಸಲಾಯಿತು.

ಬೆಳಿಗ್ಗೆ 10.10 ರಿಂದ 10.40ರ ವೃಶ್ಚಿಕ ಲಗ್ನದಲ್ಲಿ ಬೆಳ್ಳಿರಥದಲ್ಲಿ ಅಲಂಕೃತಗೊಂಡಿದ್ದ ತಾಯಿ ಚಾಮುಂಡೇಶ್ವರಿ ಉತ್ಸವ ಮೂರ್ತಿಗೆ ಸಾಹಿತಿ ಬಾನು ಮುಷ್ತಾಕ್ ಅವರು ಪುಷ್ಪಾರ್ಚನೆ ಮಾಡುವ ಮೂಲಕ ದಸರಾಗೆ ವಿದ್ಯುಕ್ತ ಚಾಲನೆ ನೀಡಿದರು. ವೇದಿಕೆ ಕಾರ್ಯಕ್ರಮದಲ್ಲಿ ಸಚಿವರುಗಳಾದ ವೆಂಕಟೇಶ್, ಮುನಿಯಪ್ಪ, ಎಚ್.ಸಿ.ಮಹದೇವಪ್ಪ, ಶಿವರಾಜ್ ತಂಗಡಗಿ, ಎಚ್.ಕೆ.ಪಾಟೀಲ್, ಶಾಸಕರಾದ ಜಿ.ಟಿ.ದೇವೇಗೌಡ, ತನ್ವೀರ್ ಸೇಠ್, ಶ್ರೀವತ್ಸ, ಜಿಲ್ಲಾಧಿಕಾರಿ ಲಕ್ಷ್ಮೀಕಾಂತ ರೆಡ್ಡಿ ಸೇರಿದಂತೆ ಮತ್ತಿತರ ಗಣ್ಯರು, ಅಧಿಕಾರಿಗಳು ಪಾಲ್ಗೊಂಡಿದ್ದರು.

## ನವರಾತ್ರಿ ಶುಭ ಕೋರಿದ ರಾಷ್ಟ್ರಪತಿ, ಉಪರಾಷ್ಟ್ರಪತಿ, ಪ್ರಧಾನಿ



ನವದೆಹಲಿ: ರಾಷ್ಟ್ರಪತಿ, ಉಪ ರಾಷ್ಟ್ರಪತಿ ಹಾಗೂ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ನಾಡಿನ ಜನತೆಗೆ ನವರಾತ್ರಿಯ ಮೊದಲ ದಿನದಂದು ಶುಭಾಶಯ ಕೋರಿದ್ದಾರೆ. ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪ ರಾಷ್ಟ್ರಪತಿ ಸಿ ಪಿ ರಾಧಾಕೃಷ್ಣನ್ ಅವರು ನವರಾತ್ರಿ ಸಂದರ್ಭದಲ್ಲಿ ದುರ್ಗಾ ದೇವಿಯು ಎಲ್ಲರನ್ನೂ ಶಕ್ತಿ, ಸಾಮರಸ್ಯ ಮತ್ತು ಬುದ್ಧಿವಂತಿ–ಕೆಯ ಕಡೆಗೆ ಕರೆದೊಯ್ಯಲಿ ಎಂದು ಪ್ರಾರ್ಥಿಸಿದರು.

ನವರಾತ್ರಿಯ ಶುಭ ಸಂದರ್ಭದಲ್ಲಿ ಆತ್ಮೀಯ ಶುಭಾಶಯಗಳು! ಮಾ ದುರ್ಗಾ ನಮಗೆ ಶಕ್ತಿ, ಬುದ್ಧಿವಂತಿಕೆ ಮತ್ತು ಸಾಮರಸ್ಯದ ಕಡೆಗೆ ಮಾರ್ಗದರ್ಶನ ನೀಡಲಿ ಮತ್ತು ಪ್ರತಿ ಮನೆಯನ್ನು ಸಂತೋಷ ಮತ್ತು ಯೋಗಕ್ಷೇಮದಿಂದ ತುಂಬಲಿ ಎಂದು ರಾಧಾಕೃಷ್ಣನ್ ಎಕ್?ಸನಲ್ಲಿ ಪೋಸ್ಟ್ ಮಾಡಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರು, ಈ ಬಾರಿಯ ಶುಭ ಅವಧಿಯು ವಿಶೇಷವಾಗಿದೆ ಏಕೆಂದರೆ ಇದು ಜಿಎಸ್‌ಟಿ–ಉಳಿತಾಯ ಹಬ್ಬದ ಅವಧಿಯಲ್ಲಿ ಪ್ರಧಾನಿಯವರು ಜನರಿಗೆ ಶುಭ ಹಾರೈಸಿದರು ಮತ್ತು ಆರೋಗ್ಯವನ್ನು ಹಾರೈಸಿದರು.

ಭಾರಿ ಸಂಖ್ಯೆಯ ವಸ್ತುಗಳ ಮೇಲಿನ ಕಡಿಮೆಯಾದ ಜಿಎಸ್‌ಟಿ ದರಗಳು ಇಂದಿನಿಂದ ಜಾರಿಗೆ ಬರಲಿವೆ, ಮೋದಿ ನಿನ್ನೆ ರಾಷ್ಟ್ರವನ್ನುದ್ದೇಶಿಸಿ ಮಾಡಿದ ಭಾಷಣದಲ್ಲಿ ನವರಾತ್ರಿಯನ್ನು ಉಳಿತಾಯ ಹಬ್ಬಕ್ಕೆ ಹೋಲಿಸಿದ್ದರು. ಸ್ಥಳೀಯ ಉತ್ಪನ್ನಗಳನ್ನು ಖರೀದಿಸಲು ಜನರನ್ನು ಒತ್ತಾಯಿಸುತ್ತಾ, ಸ್ವದೇಶಿ ಭಾರತದ ಸ್ವಾತಂತ್ರ್ಯ ಚಳವಳಿಗೆ ಶಕ್ತಿ ತುಂಬಿದ ರೀತಿಯಲ್ಲಿಯೇ ದೇಶದ ಸಮೃದ್ಧಿಗೆ ಬಲ ನೀಡುತ್ತದೆ ಎಂದು ಅವರು ಹೇಳಿದ್ದರು.ನಾವು ಪ್ರತಿಯೊಂದು ಜೊತೆಗೆ ಸ್ವದೇಶಿ ಮಂತ್ರವನ್ನು ಹೊಸ ಶಕ್ತಿಯಾಗಿಸಲಿದೆ ಎಂದು ಹೇಳಿದರು. ಅಭಿವೃದ್ಧಿ ಹೊಂದಿದ ಮತ್ತು ಸ್ವಾವಲಂಬಿ ಭಾರತದ ಸಂಕಲ್ಪವನ್ನು ಸಾಕಾರಗೊಳಿಸಲು ಸಾಮೂಹಿಕ ಪ್ರಯತ್ನದ ಭಾಗವಾಗುವಂತೆ ಅವರು ಜನರಿಗೆ ಕರೆ ನೀಡಿದರು.

## ಜಾತಿಗಣತಿ ಪ್ರಶ್ನಿಸಿದ ಅರ್ಜಿ ವಿಚಾರಣೆ ನಾಳೆಗೆ ಮುಂದೂಡಿಕೆ

ಬೆಂಗಳೂರು: ರಾಜ್ಯಸರ್ಕಾರದ ಜಾತಿ ಗಣತಿ ಪ್ರಶ್ನಿಸಿ ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿ ವಿಚಾರಣೆ ನಾಳೆಗೆ ಮುಂದೂಡಿಕೆಯಾಗಿದೆ. ಬ್ರಾಹಣ ಮಹಾಸಭಾ ಒಕ್ಕಲಿಗರ ಸಂಘ ಹಿರಿಯ ವಕೀಲ ಸುಬ್ಬಾರೆಡ್ಡಿ ಅವರು ಜಾತಿಗಣತಿ ಪ್ರಶ್ನಿಸಿ ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿ ವಿಚಾರಣೆ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ವಿಬೂಬಖ್ರು, ನ್ಯಾಯಮೂರ್ತಿ ಸಿ.ಎಂ. ಜೋಷಿ ಅವರಿದ್ದ ಪೀಠದಲ್ಲಿ ನಡೆಯಿತು.

ಅರ್ಜಿದಾರರ ಪರ ಹಿರಿಯ ವಕೀಲ ಪ್ರಭುಲಿಂಗ ನಾವಡಗಿ ವಾದ ಮಂಡಿಸಿ ರಾಜ್ಯಸರ್ಕಾರ ಜಾತಿಗಣತಿಗೆ ಆದೇಶಿಸಿದೆ. ಇದು ಸಂವಿಧಾನದ ಆರ್ಟಿಕಲ್ 342 ಎ (3ಎ)ಗೆ ವಿರುದ್ಧವಾಗಿದೆ. ಹಿಂದುಳಿದ ವರ್ಗಗಳ ಆಯೋಗದ ಈ ಹಿಂದಿನ ವರದಿ ಪರಿಗಣಿಸದೆ ಹೊಸ ಪ್ರಕ್ರಿಯೆಯನ್ನು ಆರಂಭಿಸಿದೆ. ಜಾತಿಗಣತಿಯ ಅಂಕಿ ಅಂಶಗಳನ್ನು ಆಧಾರ್‌ಗೆ ಲಿಂಕ್ ಮಾಡುತ್ತಿದ್ದಾರೆ. ಜಿಯೋ ಟ್ಯಾಗಿಂಗ್ ಮಾಡಿ ಆಧಾರ್ ಲಿಂಕ್ ಮಾಡುತ್ತಿರುವ ಸರ್ಕಾರದ ಕ್ರಮ ಕಾನೂನು ಬಾಹಿರವಾಗಿದೆ ಎಂದು ಪ್ರಬಲ ವಾದ ಮಂಡಿಸಿದರು.
ಜನಗಣತಿಯನ್ನು ಕೇಂದ್ರ ಸರ್ಕಾರ ಮಾತ್ರ ಮಾಡಬೇಕು. ರಾಜ್ಯಸರ್ಕಾರ ಮಾಡುತ್ತಿರುವ ಸರ್ವೆ ಜನಗಣತಿಗಿಂತ




ಯಾವ ರೀತಿಯಲ್ಲೂ ಕಡಿಮೆಯಿಲ್ಲ ಎಂದು ಅರ್ಜಿದಾರರ ಪರ ಹಿರಿಯ ವಕೀಲ ಜಯಕುಮಾರ್ ಎಸ್.ಪಾಟೀಲ್ ವಾದ ಮಂಡಿಸಿದರು. ಸರ್ಕಾರ ಹೊಸ ಜಾತಿಗಳನ್ನು ಸೃಷ್ಟಿ ಮಾಡುತ್ತಿದೆ. ಒಕ್ಕಲಿಗ ಕ್ರಿಶ್ಚಿಯನ್, ಬ್ರಾಹಣ ಕ್ರಿಶ್ಚಿಯನ್ ಎಂದು ವಿಂಗಡಿಸಿ ಯಾವುದೇ ಅಂಕಿ ಅಂಶದ ವಿಶ್ಲೇಷಣೆ ಇಲ್ಲದೆಯೇ ಜನಗಣತಿ ಮಾಡಲು ರಾಜ್ಯಸರ್ಕಾರ ಯಾವುದೇ ಅಧಿಕಾರವಿಲ್ಲವೆಂದು ಹಿರಿಯ ವಕೀಲರಾದ ಅಶೋಕ್ ಹಾರನಹಳ್ಳಿಯವರು ಹೇಳಿದರು.

ಅರ್ಜಿದಾರರ ಪರ ವಿವೇಕ್‌ರೆಡ್ಡಿ ವಾದ ಮಂಡಿಸಿ, ರಾಜಕೀಯ ಉದ್ದೇಶದಿಂದ ರಾಜ್ಯಸರ್ಕಾರ ಈ ಗಣತಿ ಮಾಡುತ್ತಿದೆ. ರಾಜ್ಯದ ಜನರ ಸ್ಥಿತಿಗತಿ ಪರಿಶೀಲನೆ, ಹಿಂದುಳಿದ ವರ್ಗಗಳ ಕರ್ತವ್ಯವಲ್ಲ. ಹಾಗಾಗಿ ತಡೆ ನೀಡಬೇಕೆಂದು ಮನವಿ ಮಾಡಿದರು.

ಸರ್ಕಾರದ ಪರ ವಾದ ಮಂಡಿಸಿದ ಹಿರಿಯ ವಕೀಲ ಅಭಿಷೇಕ್ ಮನುಸಿಂಘ್ವಿ ಅವರು, ನಾವು ಜನಗಣತಿ ಮಾಡುತ್ತಿಲ್ಲ. ಕೇವಲ ಸಮೀಕ್ಷೆ ಮಾಡುತ್ತಿದ್ದೇವೆ. ಇದೇ ರೀತಿಯ ಪ್ರಕರಣದಲ್ಲಿ ಈ ಹಿಂದೆಯೂ ಮಧ್ಯಂತರ ತಡೆ ನೀಡಿಲ್ಲ. ಹೀಗಾಗಿ ಯಾವುದೇ ರೀತಿ ತಡೆ ನೀಡಬಾರದು ಎಂದು ಮನವಿ ಮಾಡಿದರು.

ಅಂಕಿ ಅಂಶ ಸಂಗ್ರಹಿಸಲು ರಾಜ್ಯಸರ್ಕಾರಕ್ಕೆ ಅಧಿಕಾರವಿದೆ. ಸಮೀಕ್ಷೆ ಮೂಲಕ ಅಂಕಿ ಅಂಶ ಸಂಗ್ರಹಿಸಲಾಗುತ್ತಿದೆ. ಸಾಮಾಜಿಕ, ಆರ್ಥಿಕ ಸ್ಥಿತಿಗತಿಗಳ ಬಗ್ಗೆ ಮಾಹಿತಿ ಪಡೆಯಲಾಗುತ್ತಿದೆ. 2014 ರ ಸರ್ವೆಯ ಅಂಕಿ ಅಂಶಗಳ ಮಾಹಿತಿಯನ್ನೂ ಕೂಡ ಅಪ್ಡೇಟ್ ಮಾಡುತ್ತಿದ್ದೇವೆ. ಹಳೆಯ ಸರ್ವೆಯನ್ನು ಕೈಬಿಟ್ಟಿಲ್ಲವೆಂದು ಹೇಳಿದರು. ಶಿಕ್ಷಕರು, ಆಶಾ ಕಾರ್ಯಕರ್ತೆಯರ ಮೂಲಕ 420 ಕೋಟಿ ರೂ. ವೆಚ್ಚದಲ್ಲಿ ಸರ್ವೆ ಮಾಡಲಾಗುತ್ತಿದೆ. ಸರ್ಕಾರಿ ಕಲ್ಯಾಣ ಕಾರ್ಯಕ್ರಮಗಳನ್ನು ಜಾರಿ ಮಾಡಲು ಅಂಕಿ ಅಂಶ ಸಂಗ್ರಹಿಸಲಾಗುತ್ತಿದೆ. ಹಾಗಾಗಿ ಮಧ್ಯಂತರ ತಡೆ ನೀಡಬಾರದು ಎಂದು ಮನವಿ ಮಾಡಿದರು. ವಾದ–ಪ್ರತಿವಾದ ಆಲಿಸಿದ ನ್ಯಾಯಮೂರ್ತಿಗಳು ಮಧ್ಯಂತರ ತಡೆಯಾಜ್ಞೆ ಬಗ್ಗೆ ವಿಚಾರಣೆಯನ್ನು ನಾಳೆ ಮಧ್ಯಾಹ್ನಕ್ಕೆ ಮುಂದೂಡಿದರು.

# ಹೇಮಾವತಿ ಸಹಕಾರ ಮಹಾಮಂಡಲ ಅಭಿವೃದ್ಧಿಗೆ ಸರ್ಕಾರ ಅನುದಾನ ನೀಡಬೇಕು: ಅಧ್ಯಕ್ಷ ಆರ್ ಎ ನಾಗಣ್ಣ

ಕೆ.ಆರ್.ಪೇಟೆ: ಹೇಮಾವತಿ ಜಲಾಶಯ ಯೋಜನೆಯ ನೀರು ಬಳಕೆದಾರರ ಸಹಕಾರ ಸಂಘಗಳ ಮಹಾಮಂಡಳದಲ್ಲಿ ಸದಸ್ಯತ್ವ ಪಡೆದಿರುವ ಎಲ್ಲಾ ನೀರು ಬಳಕೆದಾರರ ಸಂಘಗಳಿಗೆ ಭಾರೀ ನೀರಾವರಿ ಸಚಿವರಾದ ಡಿ.ಕೆ.ಶಿವಕುಮಾರ್ ಅವರು ತಲಾ 3ಲಕ್ಷ ರೂ ವಾರ್ಷಿಕ ಅನುಧಾನ ನೀಡುವುದಾಗಿ ಭರವಸೆ ನೀಡಿದ್ದರು ಅದರಂತೆ ಕೂಡಲೇ ಈ ಅನುಧಾನವನ್ನು ಬಿಡುಗಡೆ ಮಾಡಿಕೊಡುವ ಮೂಲಕ ಹೇಮಾವತಿ ಜಲಾಶಯ ಯೋಜನೆಯ ಮಹಾಮಂಡಳದ ಅಭಿವೃದ್ಧಿಗೆ ಸಹಕಾರ ನೀಡಬೇಕು ಎಂದು ಮಹಾಮಂಡಳದ ಅಧ್ಯಕ್ಷ ಆರ್.ಎ.ನಾಗಣ್ಣ ಸರ್ಕಾರಕ್ಕೆ ಮನವಿ ಮಾಡಿದರು.

ಅವರು ಕೆ.ಆರ್.ಪೇಟೆ ಪಟ್ಟಣದಲ್ಲಿರುವ ಹೇಮಾವತಿ ಜಲಾಶಯ ಯೋಜನಾ ಮಟ್ಟದ ನೀರು ಬಳಕೆದಾರರ ಸಹಕಾರ ಸಂಘಗಳ ಮಹಾಮಂಡಳದ ಪ್ರಧಾನ ಕಚೇರಿಯಲ್ಲಿ ನಡೆದ 2024–25ನೇ ಸಾಲಿನ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ನಮ್ಮ ಹೇಮಾವತಿ ಜಲಾಶಯ ಯೋಜನೆಯ



ಅಚ್ಚುಕಟ್ಟು ಪ್ರದೇಶವು ಹಾಸನ, ಮಂಡ್ಯ, ತುಮಕೂರು, ಮೈಸೂರು ಜಿಲ್ಲೆ ಸೇರಿದಂತೆ 4ಜಿಲ್ಲೆಗಳ ಸುಮಾರು 16ತಾಲ್ಲೂಕುಗಳಲ್ಲಿ ವಿಸ್ತರಿಸಿದೆ. ಸುಮಾರು 200ಕ್ಕೂ ಹೆಚ್ಚು ನೀರು ಬಳಕೆದಾರರ ಸಂಘಗಳು ನೊಂದಣೀಯಾಗಿವೆ. ಈ ಪೈಕಿ 2019ರಲ್ಲಿ ಹೇಮಾವತಿ ಮಹಾಮಂಡಳ ರಚನೆಯಾದ ಬಳಿಕ ಸುಮಾರು 95ಸಂಘಗಳು ಸಕ್ರಿಯವಾಗಿವೆ.

ನಮ್ಮ ಹೇಮಾವತಿ ನೀರಾವರಿ ವ್ಯಾಪ್ತಿಯಲ್ಲಿರುವ ರೈತರ ಕಡೆಯ ಭಾಗದ ಜಮೀನುಗಳಿಗೆ ನೀರು ಹರಿಸುವುದು. ಕಾಲುವೆಗಳ ಹೂಳೆತ್ತಿಸುವುದು. ಇದರಿಂದ ರೈತರಿಗೆ ಬೇಸಾಯ ಚಟುವಟಿಕೆ ಕೈಗೊಳ್ಳಲು ಸಹಕಾರಿಯಾಗುತ್ತದೆ ಹಾಗಾಗಿ ನೀರು ಬಳಕೆದಾರರ ಸಂಘಗಳಿಗೆ ಸಚಿವರು ಘೋಷಿಸಿರುವಂತೆ ಪ್ರತಿ ನೀರು ಬಳಕೆದಾರರ ಸಂಘಕ್ಕೆ ವಾರ್ಷಿಕ 3ಲಕ್ಷ ರೂ ಅನುಧಾನ ನೀಡಬೇಕು. ಈ ಮೂಲಕ ನಮ್ಮ ಹೇಮಾವತಿ ಸಹಕಾರ ಮಹಾಮಂಡಳದ ಅಭಿವೃದ್ಧಿಗೆ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು. ಹೇಮಾವತಿ ಅಚ್ಚುಕಟ್ಟು ವ್ಯಾಪ್ತಿಯ ಮೀನುಗಾರರ ಸಹಕಾರ ಸಂಘಗಳನ್ನು ನಮ್ಮ ಮಹಾಮಂಡಳದ ವ್ಯಾಪ್ತಿಗೆ ಸೇರಿಸಿಕೊಳ್ಳಲು ಅವಕಾಶ ನೀಡಬೇಕು. ಮೀನು ಹಿಡಿಯುವ ಗುತ್ತಿಗೆಯನ್ನು ನಮ್ಮ ನೀರು ಬಳಕೆದಾರರ ಸಹಕಾರ ಸಂಘಗಳಿಗೆ ನೀಡಬೇಕು ಎಂದು ಮಹಾಮಂಡಳದ ಅಧ್ಯಕ್ಷ ಆರ್.ಎ.ನಾಗಣ್ಣ ಸರ್ಕಾರಕ್ಕೆ ಮನವಿ ಮಾಡಿದರು.

ಸಭೆಯಲ್ಲಿ ಹೇಮಾವತಿ ನೀರಾವರಿ ಇಲಾಖೆಯ ನಾಗಮಂಗಲ ವಿಭಾಗದ ಇಇ ಸುಬ್ರಹ್ಮಣ್ಯ, ಕಾಡಾ ಎಇಇ ಲಕ್ಷ್ಮಿದೇವಿ, ಕಾಡಾ ಕೃಷಿ ನಿರ್ದೇಶಕ ಮಾರುತಿ, ಕೆ.ಆರ್.ಪೇಟೆ ಹೇಮಾವತಿ ಜಲಾಶಯ ಯೋಜನೆಯ ಎಇಇ ಚಂದ್ರೇಗೌಡ, ಹೇಮಾವತಿ ನೀರಾವರಿ ಯೋಜನೆಯ ನೌಕರರ ಯೂನಿಯನ್ ಅಧ್ಯಕ್ಷ ಚಂದ್ರಶೇಖರ್, ಮಹಾಮಂಡಳದ ಉಪಾಧ್ಯಕ್ಷೆ ಜ್ಯೋತಿ, ನಿರ್ದೇಶಕರಾದ ಹೆಚ್. ರಾಜಶೇಖರ್, ಸಿ.ಎಸ್.ನಾಗೇಶ್, ಸಿದ್ದೇಗೌಡ, ಕೆ.ಎ.ರಾಮೇಗೌಡ, ಜೆ.ನರಸಿಂಹೇಗೌಡ, ಕೆ.ಆರ್.ನಗರ ಮಲ್ಲೇಗೌಡ, ಮಾರ್ಕಂಡೇಗೌಡ, ನಾಗೇಶ್, ಭೈರೇಗೌಡ, ಡಿ..ಎ.ಶಿವಪ್ಪ, ಅರಕಲಗೂಡು ಧರ್ಮ, ಕಾಡಾ ಪದ ನಿಮಿತ್ತ ಸದಸ್ಯರಾದ ಚಂದ್ರಕಲಾ, ಗಂಗಾಧರ್, ಸಂಘದ ಸಿಇಓ ಎಂ.ಜೆ.ಕುಮಾರ್, ಸಹ ಕಾರ್ಯದರ್ಶಿ ಕೆ.ಎನ್.ಲಕ್ಷ್ಮೀಶ, ಮಡುವಿಕೋಡಿ ಗಂಗಾಧರ್ ಸೇರಿದಂತೆ ಮಹಾಮಂಡಳದ ಶೇರುದಾರರು ಮಹಾಸಭೆಯಲ್ಲಿ ಭಾಗವಹಿಸಿದ್ದರು.

ಚಿತ್ರಶೀರ್ಷಿಕೆ: 22.ಕೆ.ಆರ್.ಪಿ–01: ಕೆ.ಆರ್.ಪೇಟೆ ಪಟ್ಟಣದಲ್ಲಿರುವ ಹೇಮಾವತಿ ಜಲಾಶಯ ಯೋಜನಾ ಮಟ್ಟದ ನೀರು ಬಳಕೆದಾರರ ಸಹಕಾರ ಸಂಘಗಳ ಮಹಾಮಂಡಳದ ಪ್ರಧಾನ ಕಚೇರಿಯಲ್ಲಿ ನಡೆದ 2024–25ನೇ ಸಾಲಿನ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯಲ್ಲಿ ಮಹಾಮಂಡಳದ ಅಧ್ಯಕ್ಷ ಆರ್.ಎ.ನಾಗಣ್ಣ ಅಧ್ಯಕ್ಷತೆ ವಹಿಸಿ ಮಾತನಾಡಿದರು.

# ಅಕ್ಷರದ ಜ್ಞಾನದ ಬೆಳಕಿನ ಶಕ್ತಿಯ ಮೂಲಕ ಅಜ್ಞಾನದ ಅಂದಕಾರವನ್ನು ಹೊಡೆದೋಡಿಸುವ ಶಿಕ್ಷಕರು ಸಮಾಜದ ಪರಿವರ್ತಕರಾಗಿದ್ದಾರೆ; ಮಲ್ಲಿಕಾರ್ಜುನ್ ಅಭಿಮತ

ಕೃಷ್ಣರಾಜಪೇಟೆ: ವಿದ್ಯಾರ್ಥಿಗಳನ್ನು ತಿದ್ದಿ ತೀಡಿ ಸಮಾಜಮುಖಿಯಾಗಿ ಮುನ್ನಡೆಸುವ ಶಿಕ್ಷಕರು ಆರೋಗ್ಯವಂತ ಸಮಾಜದ ನಿರ್ಮಾತೃಗಳಾಗಿದ್ದು, ಸಮಾಜ ಪರಿವರ್ತಕರಾಗಿದ್ದಾರೆ ಎಂದು ಸಮಾಜ ಸೇವಕ ರಾಜ್ಯ ಆರ್.ಟಿ.ಓ ಅಧಿಕಾರಿಗಳ ಸಂಘದ ಅಧ್ಯಕ್ಷ ಮಲ್ಲಿಕಾರ್ಜುನ ಹೇಳಿದರು.

ಅವರು ತಾಲೂಕಿನ ಮಂದಗೆರೆ ಕ್ಲಸ್ಟರ್ ವ್ಯಾಪ್ತಿಯ ಶಿಕ್ಷಕರಿಗೆ ಆಲೇನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ಬೆಂಗಳೂರಿನ ಚಂದಾಪುರದ ರಾಜಲಾಂಛನ ಸೇವಾ ಸಂಸ್ಥೆಯು ಆಯೋಜಿಸಿದ್ದ ಶಿಕ್ಷಕರ ದಿನಾಚರಣೆ, ರೇಬಿಸ್ ಜಾಗೃತಿ ಶಿಬಿರ ಹಾಗೂ ಲಸಿಕಾ ಅಭಿಯಾನ ಕಾರ್ಯಕ್ರಮದಲ್ಲಿ ಐವತ್ತಕ್ಕೂ ಹೆಚ್ಚು ಶಿಕ್ಷಕರು ಹಾಗೂ ನಿವೃತ್ತ ಶಿಕ್ಷಕರನ್ನು ಸನ್ಮಾನಿಸಿ ಗೌರವಿಸಿ ಮಾತನಾಡಿದರು. ಅಜ್ಞಾನದ ಅಂಧಕಾರವನ್ನು ಹೊಡೆದೋಡಿಸಿ ಅಕ್ಷರದ ಜ್ಞಾನದ ಬೆಳಕಿನ ಶಕ್ತಿಯ ಮೂಲಕ ಜ್ಞಾನಾಮೃತವನ್ನು ಗುಣಪಡಿಸುವ ಶಿಕ್ಷಕ ವೃತ್ತಿಯೂ ಅತ್ಯಂತ ಪವಿತ್ರವಾದ ವೃತ್ತಿಯಾಗಿದ್ದು ಶಿಕ್ಷಣದ ಸಂಸ್ಕಾರವನ್ನು ನೀಡುವ ಗುರುಗಳು ಆರೋಗ್ಯವಂತ ಸಮಾಜದ ನಿರ್ಮಾಣಕ್ಕೆ ಅತ್ಯಂತ ಮುಖ್ಯವಾದ ಪಾತ್ರವನ್ನು ವಹಿಸುತ್ತಿದ್ದಾರೆ.

ಬಾಲ್ಯದಲ್ಲಿ ನಮಗೆ ಅಕ್ಷರದ ಜ್ಞಾನವನ್ನು ತುಂಬಿ ಸಮಾಜ ಮುಖಿಯಾಗಿ ಮುನ್ನಡೆಯುವಂತೆ




ವಿನಯವಂತಿಕೆ ಶಿಸ್ತು ಹಾಗೂ ಜ್ಞಾನದ ಸಂಸ್ಕಾರವನ್ನು ನೀಡಿದ ಗುರುವನ್ನು ನಾವು ದೇವರಂತೆ ಕಾಣುತ್ತಿದ್ದೇವೆ .ಸಮಾಜದಲ್ಲಿ ಗುರುಗಳಿಗೆ ತಂದೆ-ತಾಯಿಗಳಷ್ಟೇ ಪ್ರಾಮುಖ್ಯತೆ ಇದೆ. ಭಾರತದ ರಾಷ್ಟ್ರಪತಿಗಳಾಗಿ ದೇಶವನ್ನು ಸಮರ್ಥವಾಗಿ ಮುನ್ನಡೆಸಿದ ಶಿಕ್ಷಣ ತಜ್ಞ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜನ್ಮದಿನವನ್ನು ದೇಶಾದ್ಯಂತ ಶಿಕ್ಷಕರ ದಿನಾಚರಣೆಯನ್ನಾಗಿ ಆಚ-ರಿಸಲಾಗುತ್ತಿದೆ. ರಾಷ್ಟ್ರವನ್ನು ಸುಭದ್ರವಾಗಿ ಕಟ್ಟುವಲ್ಲಿ ಆರೋಗ್ಯವಂತ ಸಮಾಜವನ್ನು ನಿರ್ಮಾಣ ಮಾಡುವಲ್ಲಿ ಶಿಕ್ಷಕರ ಪಾತ್ರ ಹಾಗೂ ಕೆಲಸ ಅತ್ಯಂತ ಪ್ರಮುಖವಾಗಿದೆ.

ಆದ್ದರಿಂದ ಸಮಾಜದಲ್ಲಿ ಇಂದಿಗೂ ಕೂಡ ಶಿಕ್ಷಕರ ಬಗ್ಗೆ ಪೂಜ್ಯ ಗೌರವ ಭಾವನೆ ಇದೆ ತಮ್ಮ ವಿದ್ಯಾರ್ಥಿಗಳ ಏಳ್ಗೆ ಹಾಗೂ ಶ್ರೇಯಸ್ಸನ್ನು ಸದಾ ಬಯಸಿ ಸಂತೋಷ ಪಡುವ ಶಿಕ್ಷಕರು ಕತ್ತಲನ್ನು ಹೊಡೆದೋಡಿಸಿ ಅಕ್ಷರ ಜ್ಞಾನದ ಮೂಲಕ ಬೆಳಕಿನ ಶಕ್ತಿಯನ್ನು ತುಂಬಿ ಅಜ್ಞಾನದ ಅಂಧಕಾರವನ್ನು ಹೊಡೆದೋಡಿಸುವ ಮಹಾನುಭಾವರಾಗಿದ್ದಾರೆ ಎಂದು ಮಲ್ಲಿಕಾರ್ಜುನ ಅಭಿಮಾನದಿಂದ ಹೇಳಿದರು. ಕೃಷ್ಣರಾಜಪೇಟೆ ಪಶು ಆಸ್ಪತ್ರೆಯ ಪಶು ವೈದ್ಯಕೀಯ ಸಹಾಯಕ ನಿರ್ದೇಶಕರಾದ ಡಾ. ದೇವರಾಜು ರೇಬಿಸ್ ಜಾಗೃತಿ ಶಿಬಿರ ಹಾಗೂ ಉಚಿತ ಚುಚ್ಚುಮದ್ದು ನೀಡುವ ಅಭಿಯಾನವನ್ನು ಉದ್ಘಾಟಿಸಿ ಮಾತನಾಡಿ ರಾಸುಗಳು ಸೇರಿದಂತೆ ನಾಯಿಗಳು ಕೂಡ ಮಾನವನ ಜೀವನದ ಅವಿಭಾಜ್ಯ ಅಂಗವಾಗಿವೆ. ಜಾನುವಾರುಗಳ ಆರೋಗ್ಯವನ್ನು ಕಾಪಾಡುವುದು ನಮ್ಮ ಕರ್ತವ್ಯವಾಗಿದೆ. ಶ್ವಾನಗಳಿಗೆ ಪ್ರತಿ ಆರು ತಿಂಗಳಿಗೆ ಅಥವಾ ವರ್ಷಕ್ಕೊಮ್ಮೆ ರೇಬಿಸ್ ನಿರೋಧಕ ಚುಚ್ಚುಮದ್ದನ್ನು ಹಾಕಿಸುವ ಮೂಲಕ ರೇಬಿಸ್ ರೋಗವು ಬರದಂತೆ ತಡೆಯುವ ಜೊತೆಗೆ ಶ್ವಾನಗಳು ಆರೋಗ್ಯವನ್ನು ಕಾಪಾಡಲು ಪ್ರಾಣಿ ಪ್ರಿಯರು ಮುಂದಾಗಬೇಕು ಎಂದು ದೇವರಾಜು ಮನವಿ ಮಾಡಿದರು.

ಬೆಂಗಳೂರಿನ ಚಂದಾಪುರದ ರಾಜಲಾಂಛನ ಸೇವಾ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ, ಹೊನ್ನೇನಹಳ್ಳಿ ಶೇಖರ್ ಪ್ರಾಸ್ತಾವಿಕ ನುಡಿಗಳನ್ನಾಡಿ ಆರೋಗ್ಯವಂತ ಸಮಾಜದ ನಿರ್ಮಾಣಕ್ಕಾಗಿ ದುಡಿಯುತ್ತಿರುವ ಶಿಕ್ಷಕರನ್ನು ಇಂದು ನಮ್ಮ ಸಂಸ್ಥೆಯ ವತಿಯಿಂದ ಸನ್ಮಾನಿಸಿ ಗೌರವಿಸುವ ಜೊತೆಗೆ ರೇಬಿಸ್ ಜಾಗೃತಿ ಶಿಬಿರ ಹಾಗೂ ಲಸಿಕ ಅಭಿಯಾನವನ್ನು ನಡೆಸಿ ಶ್ವಾನಗರ ಆರೋಗ್ಯ ಸಂರಕ್ಷಣೆಯ ಬಗ್ಗೆ ಜಾಗೃತಿ ಮೂಡಿಸಲಾಗಿದೆ ಸರ್ಕಾರಿ ಶಾಲೆಗಳ ಬಲವರ್ಧನೆಗೆ ರಾಜಲಾಂಛನ ಸೇವಾ ಸಂಸ್ಥೆಯು, ಬೆಂಗಳೂರಿನ ಪೊಲೀಸ್ ಕಮಿಷನರ್ ಡಾ. ರಾಜೇಶ್ ಅವರ ಮಾರ್ಗದರ್ಶನದಲ್ಲಿ ಕೆಲಸ ಮಾಡುತ್ತಿದೆ ಎಂದು ಹೇಳಿದರು.
ಕಾರ್ಯಕ್ರಮದಲ್ಲಿ ತಾಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಪೂರ್ಣಚಂದ್ರ ತೇಜಸ್ವಿ, ತಾಲೂಕು ಸರ್ಕಾರಿ ನೌಕರರ ಸಂಘದ ಪ್ರಧಾನ ಕಾರ್ಯದರ್ಶಿ ಧರ್ಮಪ್ಪ, ಶಿಕ್ಷಣ ಇಲಾಖೆಯ ನೌಕರರ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಆಲಂಬಾಡಿಕಾವಲು ದೇವರಾಜು, ತಾಲೂಕು ವಕೀಲರ ಸಂಘದ ಅಧ್ಯಕ್ಷ ನಾಗೇಗೌಡ, ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಮಾಜಿ ಅಧ್ಯಕ್ಷ ಕೆ.ಆರ್.ನೀಲಕಂಠ, ಶಿಕ್ಷಣ ಇಲಾಖೆಯ ಸಂಪನ್ಮೂಲ ಅಧಿಕಾರಿ ಮಹೇಶ್ ಗೌಡ, ಅಲೇನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕ ತುಳಸಿರಾಮ್, ಮಂಡ್ಯ ಜಿಲ್ಲಾ ಮಟ್ಟದ ಜನ ಮೆಚ್ಚಿದ ಶಿಕ್ಷಕ ಪ್ರಶಸ್ತಿ ವಿಜೇತ ಅಣ್ಣಾಜಪ್ಪ, ಸೇರಿದಂತೆ 40ಕ್ಕೂ ಹೆಚ್ಚು ಶಿಕ್ಷಕರು ಹಾಗೂ ನಿವೃತ್ತ ಶಿಕ್ಷಕರನ್ನು ಸನ್ಮಾನಿಸಿ ಗೌರವಿಸಲಾಯಿತು.

ಶಾಲಾ ಮಕ್ಕಳು ನೀಡಿದ ಸ್ವಾಗತ ನೃತ್ಯ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ಅತಿಥಿಗಳು ಹಾಗೂ ಗ್ರಾಮಸ್ಥರ ಮನಸೂರೆಗೊಂಡವು. ಅಗ್ರಹಾರ ಬಾಚಹಳ್ಳಿ ಗ್ರಾಮ ಪಂಚಾಯಿತಿ ಸದಸ್ಯ ಆರ್. ಶ್ರೀನಿವಾಸ್, ಜೆಡಿಎಸ್ ಮಹಿಳಾ ತಾಲ್ಲೂಕು ಕಾರ್ಯದರ್ಶಿ ರತಿ ಮಹದೇವ್, ಕಾಂಗ್ರೆಸ್ ಮಹಿಳಾ ತಾಲ್ಲೂಕು ಅಧ್ಯಕ್ಷೆ ಲೋಲಕ್ಷಿ ಜಗದೀಶ್, ಮಲ್ಲಿಕಾರ್ಜುನ ಚಾರಿಟಬಲ್ ಟ್ರಸ್ಟ್ ನಿರ್ದೇಶಕ ಗಂಜಿಗೆರೆ ಮಹೇಶ್, ಪತ್ರಕರ್ತರಾದ ಕಾಡುಮೆಣಸ ಚಂದ್ರು, ಹೊನ್ನೇನಹಳ್ಳಿ ಎಸ್. ರವಿ, ರಂಗನಾಥ್. ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು.

## ನಾಳೆ ಸೆ23 ರಂದು ಶ್ರೀ ಬನಶಂಕರಿ ಪತ್ತಿನ ಸಹಕಾರಿ ಸಂಘಕ್ಕೆ 25ನೇ ರಜತ ಮಹೋತ್ಸವದ ಸಂಭ್ರಮ ಕಾರ್ಯಕ್ರಮ

ಮುದ್ದೇಬಿಹಾಳ: ಮುದ್ದೇಬಿಹಾಳ ಶ್ರೀ ಬನಶಂಕರಿ ಪತ್ತಿನ ಸಹಕಾರಿ ಸಂಘಕ್ಕೆ 25ನೇ ರಜತ ಮಹೋತ್ಸವದ ಸಂಭ್ರಮ ಸೆ23 ರಂದು ಪಟ್ಟಣದ ರಾಘವೇಂದ್ರ ಮಂಗಲಕಾರ್ಯಾಲಯದಲ್ಲಿ ಬೆಳ್ಳಿ ಮಹೋತ್ಸವ ಹಾಗೂ 26 ನೇ ವಾರ್ಷಿಕ ಮಹಾಸಭೆ ಹಮ್ಮಿಕೊಳ್ಳಲಾಗಿದೆ ಎಂದು ಸಂಘದ ಅದ್ಯಕ್ಷ ಶಂಕರ ಹೆಬ್ಬಾಳ ತಿಳಿಸಿದರು.

ರವಿವಾರ ಸಂಘದ ಕಚೇರಿಯಲ್ಲಿ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಅವರು 26 ನೇ ವಸಂತಕ್ಕೆ ಕಾಲಿಟ್ಟ ಸಂಘದ ಬೆಳವಣಿಗೆ ಏಳ್ಗೆಗೆ ಆರಂಭದಿಂದ ಇಲ್ಲಿಯವ-ರಿನ ಆಡಳಿತ ಮಂಡಳಿ ಹಾಗೂ ಶೇರುದಾರರು ಸದಸ್ಯರು ವ್ಯವಸ್ಥಾಪಕರು ಕಾರಣ ಅವರ ಪ್ರಾಮಾಣಿಕತೆ ದಕ್ಷತೆಯಿಂದ ಸಂಘ ಇಂದು ಬೆಳ್ಳಿ ಮಹೋತ್ಸವ ಆಚರಿಸಿಕೊಳ್ಳುತ್ತಿದೆ ಈ ಬೆಳ್ಳಿ ಹಬ್ಬದ ಸಂದರ್ಭದಲ್ಲಿ ಸಂಘದ ಏಳ್ಗೆಗೆ ಪರಿಶ್ರಮಪಟ್ಟ ಸಮಾಜದ ಹಿರಿಯರನ್ನು ಗೌರವಿಸುವ ಹಾಗೂ ಹತ್ತನೆ ಹಾಗೂ ದ್ವಿತಿಯ ಪಿಯು ಪರೀಕ್ಷೆಯಲ್ಲಿ ಅತಿಹೆಚ್ಚು ಅಂಕಗಳನ್ನು ಪಡೆದ ವಿದ್ಯಾರ್ಥಿಗಳಿಗೆ ನಗದು ಪ್ರತಿಭಾ ಪುರಸ್ಕಾರ ಮಾಡಲಾಗುತ್ತದೆ ಕಾರ್ಯಕ್ರಮ ಯಶಸ್ವಿಗೂಳಸಿಬೇಕೆಂದು ವಿನಂತಿಸಿಕೂಂಡರು.

ಮುಖ್ಯ ಕಾರ್ಯನಿರ್ವಾಹಕಧಿಕಾರಿ ವಿಜಯಲಕ್ಷ್ಮಿ ಪ್ಯಾಟಿಗೌಡರ ಮಾತನಾಡಿ ಮುನ್ನೂರು ಸದಸ್ಯರು ಹಾಗೂ 3 ಲಕ್ಷ ರೂ ದುಡಿಯುವ ಬಂಡವಾಳದೂಂದಿಗೆ ಆರಂಭವಾದ ಸಂಘ ಇಂದು 1225 ಸದಸ್ಯರು ಹಾಗೂ 8 ಕೋಟಿ ರೂ ದುಡಿಯುವ ಬಂಡವಾಳ ಹೊಂದಿದೆ ಕಳೆದ 25 ವರ್ಷಗಳಿಂದ ಅಡಿಟ್ ವರ್ಗೀಕರಣದಲ್ಲಿ ಎ ಗ್ರೇಡ್ ಹೊಂದಿದೆ ಅತ್ಯುತ್ತಮ ಸಹಕಾರಿ ಸಂಘವೆಂದು ನಮ್ಮ ಬನಶಂಕರಿ ಪತ್ತಿನ ಸಹಕಾರಿ ಸಂಘ ಪ್ರಶಸ್ತಿ ಪಡೆದಿದೆ ಎಂದರು. ಪತ್ರಿಕಾಗೋಷ್ಠಿಯಲ್ಲಿ ಉಪಾಧ್ಯಕ್ಷ ರಮೇಶ ಹೆಬ್ಬಾಳ ನಿರ್ದೇಶಕರಾದ ಸಂಗಪ್ಪ ಕಲ್ಲುಂಡಿ,ದ್ಯಾವಪ್ಪ ಹುಣಶ್ಯಾಳ ಸೇರಿದಂತೆ ಸಂಘದ ಸಿಬ್ಬಂದಿ ಭಾಗವಹಿಸಿದ್ದರು.



## ಯಶಸ್ವಿಯಾಗಿ ನಡೆದ ಜನತಾಬಜಾರ್ 70ನೇ ಸರ್ವ ಸದಸ್ಯರ ಸಭೆ

ಬಳ್ಳಾರಿ: ಬಳ್ಳಾರಿಯ ಕೇಂದ್ರ ಸಹಕಾರ ಸಗಟು ಮಾರಾಟ ಸಂಘ (ಜನತಾ ಬಜಾರ್) ದ 70ನೇ ಸರ್ವ ಸದಸ್ಯರ ಸಭೆಯು ಸೋಮವಾರ ಯಶಸ್ವಿಯಾಗಿ ನೆರವೇರಿತು. ಬಳ್ಳಾರಿ ಕೇಂದ್ರ ಸಹಕಾರ ಸಗಟು ಮಾರಾಟ ಸಂಘ (ಜನತಾ ಬಜಾರ್)ದ ಅಧ್ಯಕ್ಷ ಕೆ.ಎ. ವೇಮಣ್ಣ ಅವರ ಅಧ್ಯಕ್ಷತೆಯಲ್ಲಿ ಸರ್ವ ಸದಸ್ಯರ ಸಭೆ ನಡೆದಿದ್ದು, ವಾರ್ಷಿಕ ಮಹಾಸಭೆಯ ನೋಟೀಸಿನ ಪ್ರಕಾರ 2024-25 ರ ಸಾಲಿನ ಆಡಳಿತ ಮಂಡಳಿ ವರದಿ ಮತ್ತು ಲೆಕ್ಕ ಪರಿಶೋಧನಾ ವರದಿಯನ್ನು ಮಂಡಿಸಿ ಸಭೆಯಲ್ಲಿ ಅನುಮೋದನೆ ಪಡೆಯಲಾಯಿತು.

ಸಭೆಯಲ್ಲಿ 2023-24ರ ಸಾಲಿನ ವಾರ್ಷಿಕ ಮಹಾಜನ ಸಭೆಯ ನಡಾವಳಿಗಳನ್ನು ಓದಿ ಅನುಮೋದನೆ ಪಡೆಯಲಾಯಿತು. 2025-26ರ ಸಾಲಿನ ಮುಂಗಡ ಪತ್ರ ಮತ್ತು 2025-26ರ ಸಾಲಿಗಾಗಿ ಸಿದ್ಧಪಡಿಸಲಾದ ಸಂಘದ ಕಾರ್ಯಚಟುವಟಿ-ಕೆಗಳಿಗೆ ಅನುಮೋದನೆ ಪಡೆಯಲಾಯಿತು. ಅಲ್ಲದೇ, 2024-25ರ ಸಾಲಿನ ಮುಂಗಡ ಪತ್ರದ ಹೆಚ್ಚುವರಿ ಖರ್ಚುಗಳಿಗೆ ಅನುಮೋದನೆ




ಪಡೆಯಲಾಯಿತು. ಅಲ್ಲದೇ, ಸಮಗ್ರ ಬೈಲಾವನ್ನು ಅಳವಡಿಸಿಕೊಳ್ಳುವ ಕುರಿತು ಚರ್ಚೆ ನಡೆಯಿತು.
ಬಳ್ಳಾರಿ ಕೇಂದ್ರ ಸಹಕಾರ ಸಗಟು ಮಾರಾಟ ಸಂಘ (ಜನತಾ ಬಜಾರ್) ದ ಅಧ್ಯಕ್ಷರಾದ ಕೆ.ಎ. ವೇಮಣ್ಣ ಅವರು ಸ್ವಾಗತ ಕೋರಿ, ವರದಿ ಮಂಡನೆ ಮಾಡಿದರು. ನಿರ್ದೇಶಕ ವೆಂಕಟೇಶ ಹೆಗಡೆ ಅವರು ಜನತಾ ಬಜಾರ್ ಕುರಿತು ಯಶೋಗಾಥೆಯನ್ನು ವಿವರಿಸಿದರು.
ನಿಕಟಪೂರ್ವ ಅಧ್ಯಕ್ಷರಾದ ಜಿ. ನೀಲಕಂಠಪ್ಪ, ಮಾಜಿ ಉಪಾಧ್ಯಕ್ಷೆ ನಸೀಮಾ ಬೇಗಂ, ಉಪಾಧ್ಯಕ್ಷರಾದ ಎಸ್. ಮುಜಾಹಿದ್, ನಿರ್ದೇಶಕರುಗಳಾದ ಶ್ರೀಮತಿ ಪಲ್ಲೇದ ಮೈತ್ರಿ, ಕೆ. ವೆಂಕಟಸ್ವಾಮಿ ಅಲ್ಲೀಪುರ, ಪಿ. ದಾನರೆಡ್ಡಿ, ವಿ. ಪ್ರದೀಪ್ ರೆಡ್ಡಿ, ಕೆ. ಭರಮರೆಡ್ಡಿ, ಹಲಕುಂದಿ ವಿಜಯಕುಮಾರ್ ಗೌಡ, ಕೆ.ಎಂ. ಕೇದಾರನಾಥ, ಕೋರಿ ಚನ್ನಬಸಪ್ಪ, ಎಂ. ನರೇಶ್ ಕುಮಾರ್, ಪರಿಣಿತ ಸದಸ್ಯರಾದ ಪತ್ರಕರ್ತ ಎಚ್.ಎಂ. ಮಹೇಂದ್ರ ಕುಮಾರ್ ಅವರು ವೇದಿಯಲ್ಲಿದ್ದರು.

ಕುಮಾರಿ ಸಾಯಿಶ್ರುತಿ ಹಂದ್ಯಾಳು ಹಾಗೂ ಯಲ್ಲನಗೌಡ ಅವರು ಸಂಗೀತ ಕಾರ್ಯಕ್ರಮ ಪ್ರಸ್ತುತ ಪಡಿಸಿದರು ಕ್ಯಾಷಿಯೋ ಶಿವಕುಮಾರ, ತಬಲಾ .ಯೋಗೀಶ್ ಬಣಗಾರ ಸಾತ್ ನೀಡಿದರು. ಪ್ರಧಾನ ವ್ಯವಸ್ಥಾಪಕರಾದ ಜೆ.ಎಂ. ನಾಗರಾಜ್ ಅವರು ವರದಿ ಮಂಡನೆ ಮಾಡಿದರು. ಕೆ. ಎಂ. ಕೇದಾರನಾಥ ಅವರು ಕಾರ್ಯಕ್ರಮ ನಿರೂಪಿಸಿದರು. ಅಲ್ಲೀಪುರ ವೆಂಕಟಸ್ವಾಮಿ ಅವರು ವಂದನಾರ್ಪಣೆ ಸಲ್ಲಿಸಿದರು.

## ಅಖಿಲ ಕರ್ನಾಟಕ ಅನುದಾನಿತ ಶಾಲಾ ಕಾಲೇಜುಗಳ ನೌಕರರ ಸಂಘ ಬಲವರ್ಧನೆ ನಮ್ಮ ಗುರಿ: ಜಿ.ಹನುಮಂತಪ್ಪ

ವಿಜಯಪುರ: ಸಿದ್ದೇಶ್ವರ ಹೈಸ್ಕೂಲ್ ನ ಸಭಾಂಗಣದಲ್ಲಿ ಅಖಿಲ ಕರ್ನಾಟಕ ಅನುದಾನಿತ ಶಾಲಾ ಕಾಲೇಜುಗಳ ನೌಕರರ ಸಂಘದ ಜಿಲ್ಲಾ ಘಟಕ ರಚನೆ ಹಾಗೂ ಜಿಲ್ಲಾ ಸಭೆ ಕಾರ್ಯಕ್ರಮ ಜರುಗಿತು. ಸಭೆಯನ್ನು ರಾಜಾಧ್ಯಕ್ಷ ಜಿ.ಹನುಮಂತಪ್ಪ ಉದ್ಘಾಟನೆ ಮಾಡಿ ಮಾತನಾಡುತಾ ಒಂದು ಸಂಘ ಬಲವರ್ಧನೆ ಆಗಬೇಕಾದರೆ ನೌಕರರ ಒಗ್ಗಟ್ಟು ಬಹಳ ಮುಖ್ಯ ಹಾಗಾಗಿ ಸಂಘಟಿತರಾಗಿ ನಮ್ಮ ಹಕ್ಕುಗಳಿಗೆ ಹೋರಾಟ ಮಾಡಬೇಕಾಗಿದೆ.

ಕಳೆದ ಹತ್ತಾರು ವರ್ಷಗಳಿಂದ ನಮ್ಮ ಬೇಡಿಕೆಗಳಿಗಾಗಿ ಎಲ್ಲಾ ಸಂಘಟನೆಗಳು ಹೋರಾಟ ಮಾಡುತ್ತಾ ಬಂದಿವೆ ಆದರೆ ವಿವಿಧ ಸಂಘಟನೆಗಳಲ್ಲಿ ಹರಿದು ಹಂಚಿ ಹೋಗಿರುವ ನಮ್ಮ ನೌಕರರನ್ನು ಒಟ್ಟುಗೂಡಿಸಿ ಅನುದಾನಿತ ಪ್ರಾಥಮಿಕ ದಿಂದ ಹಿಡಿದು ಪದವಿ ಕಾಲೇಜಿನ ವರೆಗೂ ಒಂದೇ ಸಂಘದ ಅಡಿ ತಂದು ಗಟ್ಟಿಯಾದ ಸಂಘಟನೆ ಮಾಡುವುದು ಅವಶ್ಯಕತೆ ಇದೆ ಹಾಗಾಗಿ ಅಖಿಲ ಕರ್ನಾಟಕ ಅನುದಾನಿತ ಶಾಲಾ ಕಾಲೇಜುಗಳ ನೌಕರರ ಸಂಘ




ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ಕ್ರಿಯಾಶೀಲ ವಾಗಿ ರಚನೆ ಮಾಡಿದ್ದೇವೆ. ವಿಜಯಪುರ ಜಿಲ್ಲೆಯ ಅನುದಾನಿತ ಪ್ರಾಥಮಿಕ ಶಾಲೆಯಿಂದ ಪದವಿ ವರೆಗಿನ ನೌಕರರು ಸಂಘದ ಸದಸ್ಯತ್ವ ಪಡೆದು ಸಂಘ ಕರೆ ಕೊಟ್ಟಾಗ ಎಲ್ಲಾ ಹೋರಾಟಗಳಲ್ಲೂ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು.

ನಮ್ಮ ಅನುದಾನಿತ ನೌಕರರರಿಗೆ ಪಿಂಚಣಿ ಜಾರಿ ಮಾಡುವುದು, ಖಾಲಿ ಹುದ್ದೆಗಳನ್ನು ತುಂಬಲು ಅನುಮತಿ ನೀಡುವುದು, ಪದವಿ ಕಾಲೇಜುಗಳ ನೌಕರರಿಗೆ ಕಾರ್ಯಭಾರ ಕಡಿಮೆ ಕಾರಣ ನೀಡಿ ಬೇರೆ ಕಾಲೇಜುಗಳಿಗೆ ನಿಯೋಜನೆ ಮಾಡುವುದನ್ನು ಕೈ ಬಿಡಬೇಕು ಇಂತಹ ಹಲವಾರು ಬೇಡಿಕೆಗಳನ್ನು ಈಡೇರಿಸಲು ಸರಕಾರಕ್ಕೆ ಒತ್ತಾಯ ಮಾಡಲು ಸಂಘ ಬಲವರ್ಧನೆ ಮಾಡಿ ಹೋರಾಟಕ್ಕೆ ಅಣಿಯಾಗಬೇಕಾಗಿದೆ ಎಂದರು. ರಾಮು ಗುಗವಾಡ ಮಾತನಾಡುತಾ ಸರಕಾರಿ ನೌಕರ-ರಿಗೆ ಸಿಗುತ್ತಿರುವ ಸೌಲಭ್ಯ ನಮ್ಮ ಅನುದಾನಿತ ನೌಕರ-ರಿಗೆ ಈ ಸರಕಾರಗಳು ನೀಡುತ್ತಿಲ್ಲ ಹಾಗಾಗಿ ನಮ್ಮ ನೌಕರರು ಸಂಘಟಿತಾರಗಬೇಕು ಹೋರಾಟದಲ್ಲಿ ಪಾಲ್ಗೊಂಡಾಗ ನಮ್ಮ ಬೇಡಿಕೆಗಳು ಈಡೇರುತ್ತವೆ ಎಂದು ಕರೆಕೊಟ್ಟರು.

ಈ ವೇಳೆ ಸಂಘದ ರಾಜ್ಯ ಸಂಘಟನಾ ಕಾರ್ಯದರ್ಶಿ ಲಕ್ಷ್ಮೀಪುತ್ರ ಕಿರನಳ್ಳಿ ಮಾತನಾಡಿ ಈಗಾಗಲೇ 2006 ನಂತರದ ಸೇವೆಗೆ ಸೇರಿದ ಅನುದಾನಿತ ಶಾಲಾ ಕಾಲೇಜುಗಳ ನೌಕರರಿಗೆ ನಿವೃತ್ತಿ ನಂತರದ ಬದುಕಿಗಾಗಿ ಪಿಂಚಣಿ ಕೊಡಬೇಕಾಗಿರುವುದು ಸರಕಾರದ ಕರ್ತವ್ಯ, ಸುಪ್ರೀಂಕೋರ್ಟ್ ಆದೇಶ ಮಾಡಿದರು ಸರಕಾರ ವಿಳಂಬ ನೀತಿ ಅನುಸರಿಸುತ್ತಿದೆ .ಪ್ರಸ್ತುತ ಸಿದ್ಧರಾಮಯ್ಯ ನವರ ಸರಕಾರ ಅಧಿಕಾರಕ್ಕೆ ಬಂದ ಕೂಡಲೇ 6ನೇ ಗ್ಯಾರಂಟಿ ಆಗಿ ಓ.ಪಿ.ಎಸ್. (ಹಳೆಯ ನಿಶ್ಚಿತ ಪಿಂಚಣಿ) ಜಾರಿ ಮಾಡುತ್ತೇವೆ ಎಂದು ಪ್ರಣಾಳಿಕೆ ಯಲ್ಲಿ ಭರವಸೆ ನೀಡಿರುತ್ತಾರೆ .ಅದರಂತೆ ಸರಕಾರ ಅಧೀಕಾರಕ್ಕೆ ಬಂದು 3 ವರ್ಷ ಆದರೂ ಬೇಡಿಕೆ ಈಡೇರಿಸಿಲ್ಲಾ ಹಾಗಾಗಿ ಬರುವ ನವೆಂಬರ್ ನಲ್ಲಿ ಶಾಲಾ ಕಾಲೇಜುಗಳನ್ನು ಬಂದು ಮಾಡಿ ಹೋರಾಟಕ್ಕೆ ಕರೆ ನೀಡುತ್ತಿದ್ದೇವೆ.

ಹೋರಾಟಕ್ಕೆ ತಾವೆಲ್ಲರೂ ಕೈ ಜೋಡಿಸಬೇಕು ಎಂದರು.
ಈ ವೇಳೆ ಸಂಘದ ಜಿಲ್ಲಾಧ್ಯಕ್ಷ ಬಸಯ್ಯ ಹಿರೇಮಠ,ಕಾರ್ಯಾಧ್ಯಕ್ಷರಾದ ರಾಮು ಗುಗವಾಡ ,ಡಾ.ಮಲ್ಲಿಕಾರ್ಜುನ ಡೊಣ್ಣೂರ, ಮಲ್ಲನಗೌಡ ಹಡಲಗೇರಿ, ಆರ್.ಎಸ್.ತುಂಗಳ, ,ಬಿ.ಎಸ್.ಪಾಟೀಲ,ರಮೇಶ ಗಂಗನಳ್ಳಿ,ಶಿವಾನಂದ ಹಿರೇಕುರುಬರ, ಗಿರೀಶ್ ಬಿರಾದಾರ, ಅಶೋಕ ಕಟ್ಟಿ ,ವಿಜಯಕುಮಾರ ವಪ್ಪಾರಿ,ರಂಜಿತ ಬಾಬರ,ಸೋಮನಾಥ ಗಣಿ, ಆನಂದ ಕುಲಕರ್ಣಿ ,ಬುಳ್ಳಪ್ಪ ಡಿ. , ಶಿವಲಿಂಗ ಉಮ್ಮರಗಿ,ಮಹಾಂತೇಶ

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.